# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002

**ಪತ್ರಿಕಾ ಪ್ರಕಟಣೆ** ದಿನಾಂಕ:19.05.2020

## ಪರಿಸರ ಮಾಲಿನ್ಯ ತಡೆಗಟ್ಟುವ ಹಿನ್ನೆಲೆಯಲ್ಲಿ ನಡೆದ ಸಭೆ ಬಗ್ಗೆ:



ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ವ್ಯಾಲಿಗಳು ಹಾಗೂ ನೀರುಗಾಲುವೆಗಳಿಗೆ ವಿವಿಧ ಕೈಗಾರಿಕೆಗಳು ಹೊರಬಿಡುತ್ತಿರುವ ರಾಸಾಯನಿಕ ಮತ್ತು ಮಲಿನ ನೀರಿನಿಂದ ಪರಿಸರ ಮಾಲಿನ್ಯ ಹಾಳಾಗುತ್ತಿದ್ದು, ಅದನ್ನು ತಡೆಗಟ್ಟುವ ನಿಟ್ಟಿನಲ್ಲಿ ಇಂದು ಪೂಜ್ಯ ಮಹಾಪೌರರು ರವರ ಅಧ್ಯಕ್ಷತೆಯಲ್ಲಿ ಪಾಲಿಕೆ ಕೇಂದ್ರ ಕಛೇರಿ ಮಹಾಪೌರರು ರವರ ಕೊಠಡಿಯಲ್ಲಿ ವಿವಿಧ ಇಲಾಖೆಗಳ ಜೊತೆ ಸಮನ್ವಯ ಸಭೆ ನಡೆಯಿತು. ಈ ವೇಳೆ ಉಪಮಹಾಪೌರರು ಶ್ರೀ ರಾಮಮೋಹನ ರಾಜು, ಆಡಳಿತ ಪಕ್ಷದ ನಾಯಕರು ಶ್ರೀ ಮುನೀಂದ್ರ ಕುಮಾರ್, ವಿರೋಧ ಪಕ್ಷದ ನಾಯಕರು ಶ್ರೀ ಅಬ್ದುಲ್ ವಾಜೀದ್, ಜೆ.ಡಿ.ಎಸ್ ಪಕ್ಷದ ನಾಯಕರು ಶ್ರೀಮತಿ ನೇತ್ರಾನಾರಾಯಣ್, ವಿಶೇಷ ಆಯುಕ್ತರು(ಘನತ್ಯಾಜ್ಯ) ಶ್ರೀ ಡಿ.ರಂದೀಪ್, ವಿಶೇಷ ಆಯುಕ್ತರು(ಆಸ್ತಿಗಳು) ಜಿ.ಮಂಜುನಾಥ್, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರು ಶ್ರೀ ವಿಜಯ್ ಕುಮಾರ್ ಗೋಗಿ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ(ಬಿಡಿಎ) ಆಯುಕ್ತರು ಡಾ. ಜಿ.ಸಿ ಪ್ರಕಾಶ್, ಜಲಮಂಡಳಿ ಮುಖ್ಯ ಅಭಿಯಂತರರು ಶ್ರೀ ಗಂಗಾಧರ್, ನೀರುಗಾಲುವೆ ವಿಭಾಗದ ಮುಖ್ಯ ಅಭಿಯಂತರರು ಶ್ರೀ ಪ್ರಹ್ಲಾದ್, ಮುಖ್ಯ ಆರೋಗ್ಯಾಧಿಕಾರಿ ಡಾ. ವಿಜೇಂದ್ರ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ಪರಿಸರ ಮಾಲಿನ್ಯ ತಡೆಗಟ್ಟುವ ನಿಟ್ಟಿನಲ್ಲಿ ಹಲವು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕಿದೆ. ಈ ಸಂಬಂಧ ಕೂಡಲೆ ಮುಖ್ಯಮಂತ್ರಿಗಳ ಜೊತೆ ಸಭೆ ನಡೆಸಿ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಪೂಜ್ಯ ಮಹಾಪೌರರು ರವರು ತಿಳಿಸಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಹಾಪೌರರು, ಪಾಲಿಕೆ ವ್ಯಾಪ್ತಿಯಲ್ಲಿ ವೃಷಭಾವತಿ ವ್ಯಾಲಿ, ಹೆಬ್ಬಾಳ ವ್ಯಾಲಿ, ಚೆಲ್ಲಘಟ್ಟ ಹಾಗೂ ಕೋರಮಂಗಲ ವ್ಯಾಲಿ ಮತ್ತು ನೀರುಗಾಲುವೆಗಳಿಗೆ ಕೈಗಾರಿಕೆಗಳು ಮಲಿನ/ ರಾಸಾಯನಿಕ ನೀರು ಬಿಡುತ್ತಿರುವ ಹಿನ್ನೆಲೆಯಲ್ಲಿ ಕೆರೆಗಳು ಹಾಳಾಗುತ್ತಿವೆ. ಕೋವಿಡ್-19 ಹಿನ್ನೆಲೆ ಲಾಕ್‌ಡೌನ್ ಜಾರಿಯಲ್ಲಿದ್ದ ವೇಳೆ ಕೈಗಾರಿಗೆಗಳು ಸ್ಥಗಿತವಾಗಿದ್ದ ಪರಿಣಾಮ ಮಲಿನ ನೀರು ಕೆರೆಗಳಿಗೆ ಸೇರದೆ ಶುಚಿತ್ವವಾಗಿರುವುದನ್ನು ಕಾಣಬಹುದಾಗಿದೆ. ಈ ನಿಟ್ಟಿನಲ್ಲಿ ಬಿಬಿಎಂಪಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಜಲಮಂಡಳಿ, ಬಿಡಿಎ, ಪೋಲೀಸ್ ಹಾಗೂ ಬೆಸ್ಕಾಂ ಇಲಾಖೆಗಳು ಸಮನ್ವತೆಯಿಂದ ಕಾರ್ಯನಿರ್ವಹಿಸಿ ಪರಿಸರ ಮಾಲಿನ್ಯ ಆಗುದನ್ನು ತಡೆಯಲು ಸೂಕ್ತ ಕ್ರಮ ವಹಿಸಬೇಕಿದೆ ಎಂದು ಹೇಳಿದರು.

ಪರಿಸರ ಹಾಗೂ ಕೆರೆಗಳ ಸಂರಕ್ಷಣೆ ಮಾಡುವುದು ಪ್ರತಿಯೊಬ್ಬ ನಾಗರೀಕನ ಕರ್ತವ್ಯವಾಗಿರುತ್ತದೆ. ಕೈಗಾರಿಕೆಗಳಿಂದ ರಾಸಯನಿಕಯುಕ್ತ ನೀರನ್ನು ಸಂಸ್ಕರಿಸದೆ ಕಲುಷಿತ ನೀರನ್ನು ಕೆರೆಗಳಿಗೆ ಬಿಟ್ಟರೆ ಅಂತಹ ಕಾರ್ಖಾನೆಗಳ ಮೇಲೆ ಶಿಸ್ತು ಕ್ರಮ ಜರುಗಿಸಬೇಕು ಎಂದರು.

**ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷರು ವಿಜಯ್ ಕುಮಾರ್ ಗೋಗಿ ರವರು ಮಾತನಾಡಿ,** ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನೆಲೆ, ಲಾಕ್‌ಡೌನ್ ಆಗಿದ್ದರಿಂದ ಕೈಗಾರಿಕೆಗಳು, ಹೋಟೆಲ್‌ಗಳು, ಉದ್ಯಮಗಳು ಕಾರ್ಯನಿರ್ವಹಿಸದ ಪರಿಣಾಮ ವಿಷಪೂರಿತ ಹೊಗೆ ಪರಿಸರಕ್ಕೆ ಸೇರುವ ಪ್ರಮಾಣ ಕಡಿಮೆಯಾಗಿದ್ದು, ವಾಯು ಮಾಲಿನ್ಯ ನಿಯಂತ್ರಣದಲ್ಲಿದೆ ಎಂದು ತಿಳಿಸಿದರು.

ಪಾಲಿಕೆ ವ್ಯಾಪ್ತಿಯಲ್ಲಿ ನದಿ, ಕೆರೆಗಳ ಸುತ್ತಲು ಇರುವ ಬಫರ್ ಜೋನ್ ಪ್ರದೇಶದಲ್ಲಿ, ಕಟ್ಟಡ ನಿರ್ಮಾಣ ಮಾಡಲು ಅನುಮತಿ ನೀಡುಬಾರದು. ಶುಚಿತ್ವ ಕಾಪಾಡಿಕೊಳ್ಳಬೇಕು. ಆಗ ಪರಿಸರ ಮಾಲಿನ್ಯವಾಗುವುದನ್ನು ತಡೆಗಟ್ಟಬಹುದಾಗಿದೆ. ಕೆಲವೆಡೆ ಉದ್ದಿಮೆ ಪರವಾನಗಿ ಪಡೆಯದೆ ನಿಯಮಬಾಹಿರವಾಗಿ ಕಾರ್ಯನಿರ್ವಹಿಸುತ್ತಿರುವ ಕೈಗಾರಿಕೆಗಳು, ಮಲಿನ ನೀರನ್ನು ಸಂಸ್ಕರಿಸದೆ ಹಾಗೆಯೇ ಚರಂಡಿಗಳಿಗೆ ಹರಿಯಬಿಡುತ್ತವೆ. ಇಂತಹ ಉದ್ದಿಮೆಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಬೇಕಿದೆ ಎಂದು ತಿಳಿಸಿದರು.

**ಮುಖ್ಯ ಅಭಿಯಂತರರು(ರಾಜಕಾಲುವೆ) ಪ್ರಹ್ಲಾದ್ ರವರು ಮಾತನಾಡಿ,** ಕೈಗಾರಿಕೆಗಳಿಂದ ವಿಷಯುಕ್ತ/ ರಾಸಯನಿಕಯುಕ್ತ ನೀರನ್ನು ಸಂಸ್ಕರಿಸದೆ ಕೆರೆಗಳಿಗೆ ಹಾಗೆಯೇ ಹರಿಯಬಿಡುತ್ತಿರುವ ಬಗ್ಗೆ ಇದುವರೆವಿಗೂ ಸುಮಾರು 496 ಪ್ರಕರಣಗಳನ್ನು ಪೋಲೀಸ್ ಠಾಣೆಗಳಲ್ಲಿ ದೂರು ದಾಖಲಿಸಲಾಗಿದೆ ಎಂದು ಮಾಹಿತಿ ನೀಡಿದರು.

**ಜಲಮಂಡಳಿ ಮುಖ್ಯ ಅಭಿಯಂತರರು ಗಂಗಾಧರ್ ರವರು ಮಾತನಾಡಿ,** ವೃಷಭಾವತಿ ವ್ಯಾಲಿಗೆ 504 ಎಂ.ಎಲ್.ಡಿ ಸೀವೆಜ್ ಸೇರ್ಪಡೆಯಾಗುತ್ತಿದ್ದು, ಈಗಾಗಲೇ 246 ಎಂ.ಎಲ್.ಡಿ ಸಾಮಾರ್ಥ್ಯದ ಸಂಸ್ಕರಣಾ ಘಟಕ ಕಾರ್ಯನಿರ್ವಹಿಸುತ್ತಿದೆ. ಅಲ್ಲದೆ ಇ-ವ್ಯಾಲಿ ಬಳಿ 150 ಎಂ.ಎಲ್.ಡಿ ಸೇರಿದಂತೆ ಇನ್ನಿತರೆ ಕಡೆ ಸಂಸ್ಕರಣಾ ಘಟಕಗಳ ಕಾರ್ಯ ಪ್ರಗತಿಯಲ್ಲಿದ್ದು, ಮಾರ್ಚ್ ವೇಳೆಗೆ ಕಾಮಗಾರಿ ಮುಗಿಯಲಿದೆ. ಬೆಳ್ಳಂದೂರು ಕೆರೆ ಬಳಿ ಕೆ.ಎಂ.ಸಿ ವ್ಯಾಲಿ ಬಳಿ 150 ಎಂ.ಎಲ್.ಡಿ ಎಸ್.ಟಿ.ಪಿ ಪ್ಲಾಂಟ್ ನಿರ್ಮಿಸಲು ಕ್ರಮಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

**ಈ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಕಟಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**